# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1189 (1226)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ವಿಷಯ : ಪೆಟ್ರೋಲ್, ಡೀಸೆಲ್ ಏರಿಕೆಯಿಂದ ಮೀನುಗಾರರು ಕಂಗಾಲಾಗಿರುವ ಬಗ್ಗೆ

(ಅ) ಕಾರವಾರ ಜಿಲ್ಲೆಯಲ್ಲಿನ ಮೀನುಗಾರರು ನಿರಂತರವಾಗಿ ಏರುತ್ತಿರುವ ಪೆಟ್ರೋಲ್, ಡೀಸೆಲ್ ದರದಿಂದ ಕಂಗಾಲಾಗಿ ಮೀನುಗಾರಿಕೆಯನ್ನು ಸ್ಥಗಿತಗೊಳಿಸಿ ಬೋಟ್‌ಗಳನ್ನು ದಡದಲ್ಲಿ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ಮೊದಲು ಕೇಂದ್ರ ಸರ್ಕಾರದಿಂದ ಮೀನುಗಾರರಿಗೆ ಡೀಸೆಲ್‌ಗೆ ಸಬ್ಸಿಡಿ ನೀಡಲಾಗುತ್ತಿದ್ದು, ಕೆಲವು ವರ್ಷಗಳಿಂದ ಕೇಂದ್ರ ಸರ್ಕಾರ ಸಬ್ಸಿಡಿ ನೀಡುವುದನ್ನು ಸ್ಥಗಿತಗೊಳಿಸಿರುವುದರಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮೀನುಗಾರರಿಗೆ ನೀಡುವ ಡೀಸೆಲ್ ಮೇಲಿನ ಸಬ್ಸಿಡಿಯನ್ನು ನೀಡಲು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)